## ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹಾವೇರಿ.

## ಸಿ.ಸಿ.ನಂ.418/2018

| | | | |
|---|---|---|---|
| ಸಾಕ್ಷಿದಾರರ ಹೆಸರು | ಡಾಃ ಶ್ಯಾಮಲಾ ಶೆಟ್ಟರ | ಸಿಡಬ್ಲ್ಯೂ | 13 |
| ತಂದೆಯ ಹೆಸರು | ಕಲ್ಯಾಣಪ್ಪ | ಪಿಡಬ್ಲ್ಯೂ | 2 |
| ವಯಸ್ಸು | 55 ವರ್ಷ | | |
| ಉದ್ಯೋಗ | ವೈದ್ಯಾಧಿಕಾರಿ ಜಿಲ್ಲಾ ಆಸ್ಪತ್ರೆ ಧಾರವಾಡ | | |
| ವಾಸಸ್ಥಳ | ಧಾರವಾಡ | | |

**ದಿಃ04.03.2026 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಹಿ.ಸ.ಸ. ಅಭಿಯೋಜಕರಿಂದ.**

1) ನಾನು ಜಿಲ್ಲಾ ಆಸ್ಪತ್ರೆಯಲ್ಲಿ ಹಾವೇರಿ ದಿನಾಂಕಃ 25.06.2012 ರಿಂದ 03.10.2023 ರವರೆಗೆ ವೈದ್ಯಾಧಿಕಾರಿಯಾಗಿ ಸೇವೆ ಸಲ್ಲಿಸಿದ್ದೇನೆ. ಈ ಪ್ರಕರಣಕ್ಕೆ ಸಂಬಂದಪಟ್ಟಂತೆ ದಿನಾಂಕಃ 14.12.2016 ರಂದು ಬೆಳಗ್ಗೆ 12-50 ಘಂಟೆಗೆ ಹಾವೇರಿ ಶಹರ ಪೊಲೀಸ ಠಾಣೆಯಿಂದ ಆರೋಪಿಯನ್ನು ಹಾವೇರಿಯ ಜಿಲ್ಲಾ ಆಸ್ಪತ್ರೆಗೆ ಚಿಕಿತ್ಸೆಗಾಗಿ ಕರೆದುಕೊಂಡು ಬಂದಾಗ ನಾನು 1 ನೇ ಆರೋಪಿಯನ್ನು ಪರಿಶೀಲನೆ ಮಾಡಿ ನೋಡಿದಾಗ ಆತನಿಗೆ ಸಕ್ಕರೆ ರೋಗ ಹೆಚ್ಚಿಗೆ ಇದ್ದುದರಿಂದ ಆತನನ್ನು ಹೆಚ್ಚಿನ ಚಿಕಿತ್ಸೆಗಾಗಿ ಹುಬ್ಬಳಿಳಯ ಕಿಮ್ಸ ಆಸ್ಪತ್ರೆಗೆ ಕಳುಹಿಸಿಕೊಟ್ಟಿರುತ್ತೇವೆ. ಕಿಮ್ಸ ಆಸ್ಪತ್ರೆಯಲ್ಲಿ 1 ನೇ ಅರೋಪಿಯು ದಿನಾಂಕಃ 15.12.2016 ರಿಂದ 17.12.2016 ರವರೆಗೆ ಒಳರೋಗಿಯಾಗಿ ಚಿಕಿತ್ಸೆ ಪಡೆದಿದ್ದಾರೆ. ನಂತರ ಅಲ್ಲಿ 1 ನೇ ಅರೋಪಿಯನ್ನು ಪರಿಶೀಲನೆ ಮಾಡಿದಾಗ ಅವರಿಗೆ ರಕ್ತದ ಒತ್ತಡ ಮತ್ತು ಸಕ್ಕರೆ ಖಾಯಿಲೆ ಇರುವದು ಕಂಡು ಬಂದಿರುತ್ತದೆ, ಅವರ ಎದೆಯಲ್ಲಿ ನೋವು ಇರದೇ ಇರುವದು ಕಂಡು ಬಂದಿರುತ್ತದೆ. ಈ ಕುರಿತಾಗಿ

ನಾನು ವೈದ್ಯಕೀಯ ಪ್ರಮಾಣ ಪತ್ರ ಕೊಟ್ಟಿದ್ದು, ಅವುಗಳನ್ನು ನಿ.ಪಿ–5 ಮತ್ತು ನಿ.ಪಿ–6 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ– 6(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ** ನಾನು ಆರೋಪಿಯನ್ನು ಮೊದಲಿಗೆ ತಪಾಸಣೆ ಮಾಡಿದಾಗ ಆತನಿಗೆ ಸಕ್ಕರೆ ಖಾಯಿಲೆ ಹಾಗೂ ರಕ್ತದ ಒತ್ತಡ ಕಂಡುಬಂದಿದ್ದು, ಆತನನ್ನು ಕಿಮ್ಸ ಆಸ್ಪತ್ರೆಗೆ ಹೆಚ್ಚಿನ ಚಿಕಿತ್ಸೆಗೆ ಕಳುಹಿಸಿಕೊಟ್ಟಿರುತ್ತೇನೆ, ಅದೇ ರೀತಿ ಕಿಮ್ಸ ಆಸ್ಪತ್ರೆಯಲ್ಲಿ 1 ನೇ ಅರೋಪಿಯು ಒಳರೋಗಿಯಾಗಿ ಚಿಕಿತ್ಸೆ ಪಡೆದಯುತ್ತಿದ್ದಾಗ ಅಲ್ಲಿಯೂ ಸಹ ಆತನಿಗೆ ರಕ್ತದ ಒತ್ತಡ ಮತ್ತು ಸಕ್ಕರೆ ಖಾಯಿಲೆ ಇತ್ತು ಎಂದು ನನ್ನ ಗಮನಕ್ಕೆ ಬಂದಿರುತ್ತದೆ ಅಂದರೆ ಸರಿ. ನಾನು ಆರೋಪಿಯನ್ನು ಪರಿಶೀಲನೆ ಮಾಡಿ ನೋಡಿರುವದಿಲ್ಲ ಅಂದರೆ ಸರಿಯಲ್ಲ. 1 ನೇ ಆರೋಪಿಯನ್ನು ಹೆಚ್ಚಿನ ಚಿಕಿತ್ಸೆಗೆ ಹುಬ್ಬಳ್ಳಿಯ ಕಿಮ್ಸ ಅಸ್ಪತ್ರೆಗೆ ಕಳುಹಿಸಿಕೊಟ್ಟಿಲ್ಲ ಅಂದರೆ ಸರಿಯಲ್ಲ. 1 ನೇ ಅರೋಪಿಗೆ ಸಕ್ಕರೆ ಖಾಯಿಲೆ ಮತ್ತು ರಕ್ತದ ಒತ್ತಡ ಇಲ್ಲದೇ ಇದ್ದರೂ ಸಹ ಸುಳ್ಳು ವೈದ್ಯಕೀಯ ಪ್ರಮಾಣ ಪತ್ರ ಕೊಟ್ಟು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೇ. ಸರಿ ಇದೆ.
ಎಂದು ಒಪ್ಪಿರುತ್ತಾರೆ.

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು
ಹಾವೇರಿ.